2) If so, what is the action taken by the Govt.?

ಶ್ರೀ. ಹೆಚ್. ಜಿ. ಗೋವಿಂದೇಗೌಡ (ಶಿಕ್ಷಣ ಸಚಿವರು) :

1) ಇಲ್ಲ

2) ಉದ್ಭವಿಸುವುದಿಲ್ಲ

1) No.

2) Does not arise.

ಜಿಲ್ಲಾ ಪಂಚಾಯಿತಿಗಳು ವ್ಯಾಪ್ತಿ ಮೀರಿ ನಿರ್ಣಯಗಳನ್ನು ಮಾಡುವುದನ್ನು ತಡೆಗಟ್ಟುವ ಬಗ್ಗೆ

440 (643) ಶ್ರೀ ಜೆ.ಸಿ. ಮಾಧುಸ್ವಾಮಿ (ಚಿಕ್ಕನಾಯಕನ ಹಳ್ಳಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

1) ಜಿಲ್ಲಾ ಪಂಚಾಯತ್‌ಗಳು ಅವರ ವ್ಯಾಪ್ತಿಮೀರಿ ನಿರ್ಣಯಗಳನ್ನು ಮಾಡುತ್ತಿರುವುದನ್ನು ತಡೆಯಲು ಕಾನೂನಿನಲ್ಲಿ ಅವಕಾಶವಿದೆಯೇ?

2) ಹಾಗಿದ್ದಲ್ಲಿ, ಆಶ್ರಯ ಸಮಿತಿಯ ಹಾಗೂ ಇತರ ಶಾಸನಬದ್ಧ ಸಮಿತಿಯ ನಡವಳಿಕೆಗಳ ಬಗ್ಗೆ ಹಾಗೂ ಪೋಲೀಸಿನಲ್ಲಿ ದಾಖಲಾಗಿ ನ್ಯಾಯಾಲಯದ ಮುಂದೆ ಇಡಬಹುದಾದ ಪ್ರಕರಣಗಳ ಬಗ್ಗೆ ತುಮಕೂರು ಜಿಲ್ಲಾ ಪಂಚಾಯತ್‌ನವರು ನಿರ್ಣಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

3) ಹಾಗಿದ್ದಲ್ಲಿ, ಸದರಿ ಜಿಲ್ಲಾ ಪಂಚಾಯಿತಿ ಮೇಲೆ ಕಾನೂನಿನ ಕ್ರಮ ಜರುಗಿಸಲಾಗಿದೆಯೇ?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು) :

1) ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ 1998ರ ಪ್ರಕರಣ 197 (3)ರನ್ವಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಇಂತಹ ವಿಷಯಗಳಲ್ಲಿ ಜಿಲ್ಲಾ ಪಂಚಾಯತ್‌ಗಳಿಗೆ ಸೂಕ್ತ ಸಲಹೆಯನ್ನು ನೀಡಬೇಕು.

2) ಇಲ್ಲ.

3) ಉದ್ಭವಿಸುವುದಿಲ್ಲ.

ಐ. ಆರ್. ಇ.ಪಿ. ಕಾರ್ಯಕ್ರಮ ನಿರ್ವಹಣೆ

441 (644) ಶ್ರೀ ಮಾಧೂ ಸ್ವಾಮಿ (ಚಿಕ್ಕನಾಯಕನ ಹಳ್ಳಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

1) ರಾಜ್ಯದಲ್ಲಿ ಐ. ಆರ್. ಇ. ಪಿ. ಕಾರ್ಯಕ್ರಮ ನಿರ್ವಹಣೆಗಾಗಿ ದಿನಗೂಲಿ ಅಥವಾ ತಾತ್ಕಾಲಿಕ ಹುದ್ದೆಯ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಇಂಜಿನಿಯರುಗಳ ಸಂಖ್ಯೆ ಎಷ್ಟು?